JANUARY 12, 2026

AKASHAVANI - DHARWAD

PRADESH SAMACHARA (KANNADA) 12.00 P.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ಇಂದು ರಾಷ್ಟ್ರೀಯ ಯುವ ದಿನಾಚರಣೆ, ದೇಶ ಕಂಡ ಅಪ್ರತಿಮ ಸಂತ, ರಾಜಯೋಗ ಪ್ರವರ್ತಕರಾದ ಸ್ವಾಮಿ ವಿವೇಕಾನಂದರ ಜನ್ಮದಿನದಂದು, ಅವರ ಕೊಡುಗೆಗಳನ್ನು ಸ್ಮರಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಸೇರಿದಂತೆ ಗಣ್ಯರು ಗೌರವ ನಮನಗಳನ್ನು ಸಲ್ಲಿಸಿದ್ದಾರೆ. ಕೇಂದ್ರ ಗ್ರಾಹಕ ವ್ಯವಹಾರಗಳ ಖಾತೆ ಸಚಿವರಾದ ಪ್ರಲ್ಹಾದ್ ಜೋಶಿ, ತಮ್ಮ ಎಕ್ಸ್ ಖಾತೆ ಮೂಲಕ ಸ್ವಾಮಿ ವಿವೇಕಾನಂದರ ಆದರ್ಶ, ತತ್ವಗಳು ಎಲ್ಲರಿಗೂ ಸದಾ ಪ್ರೇರಣೆಯಾಗಿರಲಿ ಎಂದು ಆಶಿಸಿದ್ದಾರೆ. ರಾಷ್ಟ್ರೀಯ ಯುವ ದಿನಾಚರಣೆ ಹಿನ್ನೆಲೆ, ರಾಜ್ಯದ ಎಲ್ಲ ಜಿಲ್ಲಾ ಕೇಂದ್ರಗಳಲ್ಲಿ ವಿಶೇಷ ಕಾರ್ಯಕ್ರಮಗಳು ಆಯೋಜಿತವಾಗಿವೆ. 'ಸ್ವಯಂ ಪ್ರಜ್ವಲಿತರಾಗಿ, ಜಗತ್ತನ್ನು ಪ್ರಭಾವಿಸಿ' ಎಂಬ ಧ್ಯೇಯವಾಕ್ಯದೊಂದಿಗೆ, ಧಾರವಾಡದಲ್ಲಿ ಆಯೋಜಿತ ರಾಷ್ಟ್ರೀಯ ಯುವ ದಿನಾಚರಣೆ ಕಾರ್ಯಕ್ರಮದ ಬಗ್ಗೆ, ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಮೇರಾ ಯುವ ಭಾರತ ಕೇಂದ್ರದ, ಜಿಲ್ಲಾ ಯುವಜನ ಅಧಿಕಾರಿ ಗೌತಮ್ ರೆಡ್ಡಿ.

<><><>

ಗೌತಮ ರೆಡ್ಡಿ 37 ಸೆಕೆಂದುಗಳು

<><><>

ಪಶ್ಚಿಮಘಟ್ಟದ ತಪ್ಪಲಿನ, ಬೇಡ್ತಿ ಅಘನಾಶಿನಿ ಸೇರಿದಂತೆ, ಬೃಹತ್ ನದೀ ತಿರುವು ಯೋಜನೆಗಳು ಹಾಗೂ ಶರಾವತಿ ಪಂಪ್ಡ್ ಸ್ಟೋರೇಜ್ ಸೇರಿದಂತೆ, ಬೃಹತ್ ಜಲವಿದ್ಯುತ್ ಯೋಜನೆಗಳನ್ನು ಜಾರಿಗೊಳಿಸದಂತೆ, ಬೇಡ್ತಿ ಅಘನಾಶಿನಿ–ಶರಾವತಿ ಕಣಿವೆ ಉಳಿಸಿ, ಬೃಹತ್ ಜನ ಸಮಾವೇಶ, ಆಗ್ರಹಿಸಿದೆ. ಉತ್ತರಕನ್ನಡ ಜಿಲ್ಲೆ, ಶಿರಸಿಯ ಎಂ.ಇ.ಎಸ್. ಮಹಾವಿದ್ಯಾಲಯದ ಮೈದಾನದಲ್ಲಿ ಜರುಗಿದ, ಸಮಾವೇಶದಲ್ಲಿ ಶ್ರೀ ಸ್ವರ್ಣವಲ್ಲೀ ಸಂಸ್ಥಾನದ, ಶ್ರೀ ಗಂಗಾಧರೇಂದ್ರ ಸರಸ್ವತಿ ಸ್ವಾಮೀಜಿ ಅಧ್ಯಕ್ಷತೆಯಲ್ಲಿ, 7 ನಿರ್ಣಯಗಳನ್ನು, ಜನ ಸಮಾವೇಶ ಕೈಗೊಂಡಿದೆ.

<><><>

ಈ ಮಧ್ಯೆ, ಹಾವೇರಿ, ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗಳ ವ್ಯಾಪ್ತಿ ಹೊಂದಿರುವ, ವರದಾ ನದಿ ಹಾಗೂ ಧಾರವಾಡ ಉತ್ತರಕನ್ನಡ ಜಿಲ್ಲೆಗಳಲ್ಲಿ ಹರಿಯುವ, ಬೇಡ್ತಿ ನದಿ ಜೋಡಣೆ ಯೋಜನೆ ಜಾರಿಗೆ, ಜನಜಾಗೃತಿ ಮೂಡಿಸಲು, ಹಾವೇರಿ ಜಿಲ್ಲೆಯಲ್ಲಿ ಮಠಾಧೀಶರು, ಜನಪ್ರತಿನಿಧಿಗಳ ಸಭೆ ನಡೆಸಿ, ಮನವರಿಕೆ ಮಾಡಲಾಗುವುದು ಎಂದು, ಹಾವೇರಿ ಸಂಸದ, ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ.

<><><>

ಡಾಕ್ಟರ ಎಸ್.ಎಲ್ ಭೈರಪ್ಪ, ಅವರ ಬರಹಗಳು ಸದಾ ಕಾಲಕ್ಕೆ ಪ್ರಸ್ತುತವಾಗಿವೆ, ಅವರ ಸಾಹಿತ್ಯ ಸೃಷ್ಟಿ ಇಡೀ ಭಾರತಕ್ಕೆ ಅನ್ವಯವಾಗುವಂತಹ ವ್ಯಾಪ್ತತೆ, ಉದಾತ್ತತೆ ಹಾಗೂ ಅಧ್ಯಯನಶೀಲತೆಯನ್ನು ಒಳಗೊಂಡಿವೆ ಎಂದು ಶತಾವಧಾನಿ ಡಾಕ್ಟರ ಡಾಕ್ಟರ ಆರ್. ಗಣೇಶ ಹೇಳಿದರು. ಮಂಗಳೂರು ಟಿ.ಎಂ.ಎ ಪೈ ಸಭಾಂಗಣದಲ್ಲಿ ಆಯೋಜಿತ ಎಂಟನೇ ಆವೃತ್ತಿಯ ಸಾಹಿತ್ಯ ಹಬ್ಬ –ಲಿಟ್ ಫೆಸ್ಟ್ ಸಮಾರೋಪ ಸಮಾರಂಭದಲ್ಲಿ, 'ಡಾಕ್ಟರ ಎಸ್.ಎಲ್ ಭೈರಪ್ಪ ದೃಷ್ಟಿಕೋನದ ಸಾಹಿತ್ಯ ರಚನೆ ಸಾಧ್ಯತೆ ಕುರಿತಾಗಿ ಅವರು ಮಾತನಾಡಿದರು. ಎರಡು ದಿನಗಳ ಕಾಲ ಜರುಗಿದ ಲಿಟ್ ಫೆಸ್ಟ್ ನ, ವಿವಿಧ ಗೋಷ್ಠಿಗಳಲ್ಲಿ, ಸುಮಾರು 65 ಕ್ಕೂ ಹೆಚ್ಚು ಚಿಂತಕರು, ಸಾಹಿತಿಗಳು ಪಾಲ್ಗೊಂಡಿದ್ದರು.

<><><>

ಶಿವಮೊಗ್ಗ ಜಿಲ್ಲೆ, ಸಾಗರದ ಶರಾವತಿ ಹಿನ್ನೀರು ಪ್ರದೇಶಕ್ಕೆ ಸ್ನೇಹಿತರ ಜೊತೆ ಕುಟುಂಬ ಸಹಿತ ಪ್ರವಾಸಕ್ಕೆ ತೆರಳಿದ್ದ, ಮಾಸೂರಿನ ಪಶು ವೈದ್ಯಾಧಿಕಾರಿ ಡಾಕ್ಟರ ಸುನಿಲ್ ಈಜಲು ತೆರಳಿದ್ದ ಸಂದರ್ಭ ನೀರಿನಲ್ಲಿ ಮುಳುಗಿ ಮೃತಪಟ್ಟ ದುರ್ಘಟನೆ ಸಂಭವಿಸಿದೆ. ಅಗ್ನಿಶಾಮಕ ದಳದ ಸಿಬ್ಬಂದಿ ಕಾರ್ಯಾಚರಣೆ ನಡೆಸಿ, ಮೃತದೇಹವನ್ನು ಹೊರ ತೆಗೆದಿದ್ದಾರೆ. ಸಾಗರ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

<><><>

ಕಲ್ಯಾಣ ಕರ್ನಾಟಕ ಭಾಗದ ಪ್ರತಿಭಾವಂತ ಅಭ್ಯರ್ಥಿಗಳಿಗಾಗಿ, ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಕೇಂದ್ರ, 'ಪ್ರಬುದ್ಧ ಪರೀಕ್ಷಾ ಪೂರ್ವ ತರಬೇತಿ ಅಕಾದೆಮಿ', ಕಲಬುರಗಿ ಹೊರ ವಲಯದ, ವಾಜಪೇಯಿ ಬಡಾವಣೆಯಲ್ಲಿ, ನೂತನವಾಗಿ ನಿರ್ಮಾಣಗೊಂಡಿದೆ. ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ ಖರ್ಗೆ, ಅಕಾದೆಮಿಗೆ ಚಾಲನೆ ನೀಡಿ, 10 ಸಾವಿರ ಚದರ ಅಡಿ ಕ್ಷೇತ್ರದಲ್ಲಿ, 30 ಕೋಟಿ ರೂಪಾಯಿ ವೆಚ್ಚದಲ್ಲಿ ತರಬೇತಿ ಕೇಂದ್ರ ನಿರ್ಮಾಣಗೊಂಡಿದೆ. ಈಗಾಗಲೇ 10 ಸಾವಿರ ಉದ್ಯೋಗಾಕಾಂಕ್ಷಿಗಳು, ಕೆ.ಇ.ಎ. ಮೂಲಕ ಪರೀಕ್ಷೆ ಎದುರಿಸಿದ್ದಾರೆ ಎಂದರು. ಸಚಿವ ಶರಣಪ್ರಕಾಶ ಪಾಟೀಲ ಪಾಲ್ಗೊಂಡಿದ್ದರು.

<><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಇಂದು ಕಲಬುರಗಿ ಜಿಲ್ಲೆ ಪ್ರವಾಸ ಕೈಗೊಂಡಿದ್ದು, ಈ ಮಧ್ಯಾಹ್ನ 12.30 ಕ್ಕೆ ಯಡ್ರಾಮಿಯಲ್ಲಿ 'ಪ್ರಜಾ ಸೌಧ' ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಇದೇ ಸಂದರ್ಭ ಅವರು, ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಿದ್ದಾರೆ.

<><><>

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಮತದಾರರ ಪಟ್ಟಿಗೆ ಹೆಸರು ನೋಂದಾಯಿಸಲು, ಜನವರಿ 18ರವರೆಗೆ ವಿಶೇ ಅಭಿಯಾನ ಆಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>